**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ**

**ದಂಡಾಧಿಕಾರಿಗಳು ನ್ಯಾಯಾಲಯ, ದೇವದುರ್ಗ.**

**CC No.558/2023**

**CW - 2 PW-3**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಹನುಮಂತಾ |
| ತಂದೆ | ಃ | ಹನುಮಂತಾ |
| ವಯಸ್ಸು | ಃ | 51 |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ವಂದಲಿ |
| ಪ್ರಮಾಣಿಕರಿಸಿದ ದಿನಾಂಕ | ಃ | **17-01-2026** |

---

**<u>ಮುಖ್ಯ ವಿಚಾರಣೆ:-</u> ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಪಂಚನಾಮೆ ಮೇಲೆ ಇದ್ದ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ-1 ಎಂದು ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಪಂಚನಾಮೆಯಲ್ಲಿ ಬರೆದ ಸಂಗತಿಗಳು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು:-</u> ಮಾನ್ಯ ಸ.ಸ.ಅ ರವರಿಂದ**

ದಿನಾಂಕ 14-05-2023 ರಂದು ಬೆಳಿಗ್ಗೆ 08:00 ರಿಂದ 09:00 ಗಂಟೆ ವರೆಗೆ ಚಾಸಾ-4 ರವರ ತೊರಿಸಿದ ಗುನ್ಹೇ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆ ಮಾಡಿ 1 ಬಡಿಗೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು:-</u> ಆರೋಪಿ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.**

**ಮರುವಿಚಾರಣೆ:- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.